# ಕರ್ನಾಟಕವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 37

ಸದಸ್ಯರ ಹೆಸರು : ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು.

ಉತ್ತರಿಸಬೇಕಾದ ದಿನಾಂಕ : 04.03.2025

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಕರಾವಳಿ ಮತ್ತು ಮಲೆನಾಡು ಪ್ರದೇಶದಲ್ಲಿ ನಿರಂತರವಾಗಿ ನಾಲ್ಕು ತಿಂಗಳು ಸುರಿದ ಮಳೆ ಮತ್ತು ಅದರಿಂದ ಕಾಡಿದ ಕೊಳೆ ರೋಗದಿಂದಾಗಿ ವ್ಯಾಪಕವಾಗಿ ಬೆಳೆ ಹಾನಿ ಆಗುವುದರ ಜೊತೆಗೆ ಅಡಿಕೆ ಇಳುವರಿ ಗಣನೀಯವಾಗಿ ಕುಂಠಿತಗೊಂಡಿರುವುದರಿಂದ, ಅಡಿಕೆ ಬೆಳೆಗಾರರು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಪ್ರತಿ ವರ್ಷ ಕೊಳೆ ರೋಗದ ಆತಂಕ ಇದ್ದರೂ, ಈ ಸಲದ ಮಳೆಗಾಲ ಮಾತ್ರ ಅಡಿಕೆ ಬೆಳೆಗಾರರಿಗೆ ಬೆಳೆ ಮತ್ತು ಆದಾಯದಲ್ಲಿ ದೊಡ್ಡ ನಷ್ಟ ನೀಡಿದ್ದು, ಅತೀವ ಸಂಕಷ್ಟಕ್ಕೆ ಸಿಲುಕಿರುವ ಬೆಳೆಗಾರರ ನೆರವಿಗೆ ಸರ್ಕಾರ ಇದೂವರೆಗೆ ಕೈಗೊಂಡಿರುವ ಕ್ರಮಗಳೇನು; | **ಅಡಿಕೆ ಬೆಳೆಗಾರರ ನೆರವಿಗೆ ಕೈಗೊಂಡ ಕ್ರಮಗಳು ಕೆಳಕಂಡಂತಿವೆ.**<br><br>**ಅಡಿಕೆ ಕೊಳೆರೋಗ:**<br>1. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯಡಿ ಅಡಿಕೆ ಬೆಳೆ ಸೇರಿದಂತೆ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಘಟಕ ವೆಚ್ಚದ ರೂ.4000 ಗಳಲ್ಲಿ ಶೇ.30 ರಂತೆ, ಪ್ರತಿ ಹೆಕ್ಟೇರ್ ಗೆ ರೂ.1200 ರಂತೆ 4 ಹೆಕ್ಟೇರ್ ವರೆಗೆ ಗರಿಷ್ಠ ರೂ. 4800 ಗಳ ಸಹಾಯಧನ ನೀಡಲಾಗುತ್ತಿದೆ.<br><br>2. ಪ್ರಸಕ್ತ ಸಾಲಿನಲ್ಲಿ ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆಯಡಿ ಅಡಿಕೆ ಬೆಳೆ ಸೇರಿದಂತೆ ಘಟಕ ವೆಚ್ಚ ಪ್ರತಿ ಹೆಕ್ಟೇರ್ ಗೆ ರೂ.10,000/- ಗಳಲ್ಲಿ ಸಾಮಾನ್ಯ ವರ್ಗದವರಿಗೆ ಶೇ.75 ರಂತೆ ರೂ.7,500/- ಹಾಗೂ |

| | | |
|---|---|---|
| | | ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ. 90ರಷ್ಟು ರೂ.9,000/- ರಂತೆ ಸಸ್ಯ ಸಂರಕ್ಷಣೆ ಔಷಧಿಗಳ ಸಹಾಯಧನ ನೀಡಲಾಗುತ್ತಿದೆ. ಈ ಬಾಬ್ತು ರೂ.340.00 ಲಕ್ಷಗಳನ್ನು ವಿನಿಯೋಗಿಸಲಾಗುತ್ತಿದೆ.<br><br>3. ಅಡಿಕೆ ಕೊಳೆ ರೋಗ ಬಾಧಿತ ರೈತರಿಗೆ ಪರಿಹಾರ ಒದಗಿಸಲು ಕೇಂದ್ರ ಸರ್ಕಾರಕ್ಕೆ ರೂ.178.00 ಕೋಟಿಗಳನ್ನು 79,123.67 ಹೆಕ್ಟೇರ್ ಪ್ರದೇಶಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಪರಿಶೀಲನೆಯಲ್ಲಿರುತ್ತದೆ.<br><br>4. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ.<br><br>**ಎಲೆಚುಕ್ಕೆ ರೋಗ:**<br><br>1. 2023-24ನೇ ಸಾಲಿನಲ್ಲಿ ರೈತರಿಗೆ ಪ್ರತಿ ಹೆಕ್ಟೇರ್‌ಗೆ ರೂ.4,000.00 ಗಳಂತೆ 1.5 ಹೆಕ್ಟೇರ್ ವರೆಗೆ ಪ್ರತಿ ಫಲಾನುಭವಿಗೆ ಗರಿಷ್ಠ ರೂ.6,000/- ಮೊತ್ತದ ಸಸ್ಯ ಸಂರಕ್ಷಣಾ ಔಷಧಿಗಳನ್ನು 6,250 ಹೆಕ್ಟೇರ್ ಪ್ರದೇಶಕ್ಕೆ ವಿತರಿಸಿ ರೂ.250.00 ಲಕ್ಷಗಳ ಅನುದಾನವನ್ನು 12,300 ಅಡಿಕೆ ಬೆಳೆಗಾರರಿಗೆ ಸಹಾಯಧನವನ್ನು ನೀಡಲಾಗಿರುತ್ತದೆ.<br><br>2. ಅಡಿಕೆ ಬೆಳೆಗಾರರಿಗೆ ಅಡಿಕೆ ಬೆಳೆಯ ಕಟಾವು ಹಾಗೂ ಸಿಂಪರಣೆಗಾಗಿ (ದೋಟಿ) ಖರೀದಿಸಲು ಕೃಷಿ ಯಾಂತ್ರೀಕರಣ ಯೋಜನೆಯಡಿ ಸಾಮಾನ್ಯ ವರ್ಗದವರಿಗೆ ಶೇ.40 ರಷ್ಟು ಹಾಗೂ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಶೇ.50 ರಂತೆ ಸಹಾಯಧನ ನೀಡಲಾಗುತ್ತಿದೆ. 2023-24 ನೇ ಸಾಲಿನಲ್ಲಿ 1,201 ಫಲಾನುಭವಿಗಳಿಗೆ ರೂ.366.68 ಲಕ್ಷಗಳ ಸಹಾಯಧನ ನೀಡಲಾಗಿದೆ.<br><br>3. ಅಡಿಕೆ ಎಲೆಚುಕ್ಕೆ ರೋಗದ ನಿಯಂತ್ರಣ ಕುರಿತು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ತಜ್ಞರ ಸಹಯೋಗದೊಂದಿಗೆ ತರಬೇತಿ, ಕಾರ್ಯಾಗಾರಗಳು ಹಾಗೂ |

| | | |
|---|---|---|
| | | ಪ್ರಾತ್ಯಕ್ಷತೆಗಳನ್ನು ಏರ್ಪಡಿಸುವುದರ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.<br><br>4. ಇಲಾಖೆಯಿಂದ ಅಡಿಕೆ ಎಲೆಚುಕ್ಕೆ ರೋಗದ ನಿಯಂತ್ರಣಕ್ಕಾಗಿ, ಹೆಕ್ಸೋಕೊನೊಜೋಲ್ (Hexoconazole), ಟೆಬುಕೊನೊಜೋಲ್ (Tebuconazole), ಪ್ರೋಪಿಕೊನೊಜೋಲ್ (Propiconazole) ಮತ್ತು ಪ್ರೋಪಿನೆಬ್ (Propineb) ಎಂಬ ಸಸ್ಯ ಸಂರಕ್ಷಣಾ ಔಷಧಿಗಳನ್ನು ತಜ್ಞರ ಶಿಫಾರಸ್ಸಿನನ್ವಯ ಹಾನಿಯಾದ ಪ್ರದೇಶದ ರೈತರಿಗೆ ವಿತರಿಸಲಾಗುತ್ತಿದೆ.<br><br>5. ಅಡಿಕೆ ಎಲೆ ಚುಕ್ಕೆ ರೋಗ ಹಾಗೂ ಹಳದಿ ಎಲೆ ರೋಗಗಳ ನಿಯಂತ್ರಣಕ್ಕಾಗಿ ಕೇಂದ್ರ ಸರ್ಕಾರ ನೇಮಿಸಿರುವ ವೈಜ್ಞಾನಿಕ ತಂಡದ ಸಮಿತಿಯು ಫೈಟೋಸ್ಯಾನಿಟರಿ (Phytosanitory) ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು), ಪೋಷಕಾಂಶಗಳ ನಿರ್ವಹಣೆ, ಸಸ್ಯ ಸಂರಕ್ಷಣೆ ಕ್ರಮಗಳ ಅಳವಡಿಕೆ ಹಾಗೂ ತಾಂತ್ರಿಕ ಮಾಹಿತಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಶಿಫಾರಸ್ಸು ಮಾಡಿದೆ.<br><br>6. ಈ ಅನ್ವಯ ಎಲೆ ಚುಕ್ಕೆ ರೋಗದಿಂದ ಹಾನಿಯಾಗಿರುವ ಸುಮಾರು 53,977 ಹೆಕ್ಟೇರ್ ಪ್ರದೇಶಕ್ಕೆ ರೂ.225.73 ಕೋಟಿಗಳಿಗೆ ಪ್ರಸ್ತಾವನೆ ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಅನುದಾನ 60:40 ರ ಅನುಪಾತದಲ್ಲಿದ್ದು, ಈ ಕಾರ್ಯಕ್ರಮವು 2 ವರ್ಷಗಳ ಅವಧಿಯದ್ದಾಗಿರುತ್ತದೆ.<br><br>7. 2024-25 ನೇ ಸಾಲಿಗೆ ರೂ. 112.83 ಕೋಟಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು, ಇದರಲ್ಲಿ ಕೇಂದ್ರ ಸರ್ಕಾರದ ಪಾಲಿನ ಅನುದಾನ ರೂ. 6,771.95 ಲಕ್ಷಗಳಲ್ಲಿ ರೂ. 3,700.00 ಲಕ್ಷಗಳನ್ನು (60%) ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ್ದು, ಅನುಷ್ಠಾನಕ್ಕಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.<br><br>8. ಅಡಿಕೆ ಎಲೆಚುಕ್ಕೆ ರೋಗದ ನಿಯಂತ್ರಣ ಕುರಿತು ಸಂಶೋಧನೆ ಕೈಗೊಳ್ಳಲು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ರವರಿಗೆ 2023-24 ನೇ ಸಾಲಿನಲ್ಲಿ ರೂ.43.61 ಲಕ್ಷಗಳ ಅನುದಾನವನ್ನು ನೀಡಲಾಗಿದ್ದು, ಸಂಶೋಧನೆಯು ಪ್ರಗತಿಯಲ್ಲಿರುತ್ತದೆ. |

| | | |
|---|---|---|
| | | <u>**ಹಳದಿ ಎಲೆ ರೋಗ:**</u><br><br>1. ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಅಡಿಕೆ ಹಳದಿ ಎಲೆ ರೋಗ ಬಾಧಿತ ಪ್ರದೇಶಗಳಲ್ಲಿ ಅಡಿಕೆ ಬೆಳೆಯ ಬದಲಾಗಿ ಇತರೆ ವಾಣಿಜ್ಯ ತೋಟಗಾರಿಕೆ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳುಮೆಣಸು, ಜಾಯಿಕಾಯಿ, ಬೆಣ್ಣೆ ಹಣ್ಣು ಹಾಗೂ ಇತರೆ ಬೆಳೆಗಳನ್ನು ಬೆಳೆಯಲು ಆಯಾ ಬೆಳೆಗೆ ಅನುಗುಣವಾಗಿ ಶೇ.40 ರಷ್ಟು ಪ್ರತಿ ಹೆಕ್ಟೇರ್ ಗೆ ರೂ.11,952 ರಿಂದ ರೂ.1,23,483 ರವರೆಗೆ ಸಹಾಯಧನವನ್ನು 4 ಹೆಕ್ಟೇರ್ ವರೆಗೆ ನೀಡಲಾಗಿದೆ. 2023-24 ನೇ ಸಾಲಿನಲ್ಲಿ 811.11 ಹೆಕ್ಟೇರ್ ಪ್ರದೇಶದ ನಿರ್ವಹಣೆಗೆ 731 ಫಲಾನುಭವಿಗಳಿಗೆ ರೂ. 149.30 ಲಕ್ಷ ಸಹಾಯಧನ ನೀಡಲಾಗಿರುತ್ತದೆ.<br><br>2. ಅಡಿಕೆ ಹಳದಿ ಎಲೆ ರೋಗದ ನಿರ್ವಹಣೆ ಕುರಿತು 21 ತರಬೇತಿ ಕಾರ್ಯಕ್ರಮಗಳನ್ನು ಕೈಗೊಂಡಿದ್ದು ಅಂದಾಜು 3,000 ರೈತರು ತರಬೇತಿಯ ಪ್ರಯೋಜನವನ್ನು ಪಡೆದಿರುತ್ತಾರೆ.<br><br>3. ಸದರಿ ರೋಗ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡರವರಿಗೆ ರೂ.50.00 ಲಕ್ಷಗಳ ಅನುದಾನವನ್ನು ಪ್ರಯೋಗಾಲಯದ ಉನ್ನತೀಕರಣಕ್ಕಾಗಿ ಒದಗಿಸಲಾಗಿದೆ. ಇದರಿಂದ ರೋಗವನ್ನು ತುರ್ತಾಗಿ ಕಂಡುಹಿಡಿಯಲು ಸಹಕಾರಿಯಾಗುತ್ತಿದೆ.<br><br>4. ಹಳದಿ ಎಲೆ ರೋಗ ರಹಿತ ಅಡಿಕೆ ಸಸಿಗಳನ್ನು ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಂದ ಉತ್ಪಾದಿಸಲಾಗುತ್ತಿದೆ.<br><br>5. ಇಲಾಖಾ ವತಿಯಿಂದ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ವಿಶ್ವವಿದ್ಯಾಲಯದ ತಜ್ಞರು ಹಾಗೂ ಇಲಾಖೆಯ |

| | | |
|---|---|---|
| | | ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.<br>6. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯ MIDH ನ "INNOVATIVE RESEARCH COMPONENT" ಅಡಿಯಲ್ಲಿ ರೂ. 689 ಲಕ್ಷಗಳ ವೆಚ್ಚದಲ್ಲಿ ಸಂಶೋಧನೆ ಕೈಗೊಳ್ಳಲು ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ. |
| ಇ) | ಅಡಿಕೆ ಬೆಳೆಯುವ ಪ್ರಮುಖ ಪ್ರದೇಶಗಳಲ್ಲಿ ಈ ಬಾರಿ ಬೆಳೆಯ ಪ್ರಮಾಣ ಸುಮಾರು ಶೇ.40 ರಷ್ಟು ನಷ್ಟ ಆಗಿದ್ದು, ಈ ಸಂಕಷ್ಟದ ಪರಿಸ್ಥಿತಿಯಲ್ಲಿ ಬೆಳೆಗಾರರ ಹಿತರಕ್ಷಣೆಗೆ ಸರ್ಕಾರ ಈ ಕೂಡಲೇ ಮುಂದಾಗುವುದೇ? | ಹೌದು.<br>ವಿವರಣೆಯನ್ನು ಮೇಲಿನ ಉತ್ತರದಲ್ಲಿ ನೀಡಲಾಗಿದೆ. |

ಸಂಖ್ಯೆ: HORTI 46 HGM 2025

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು